# ಪಾಲಿಕೆ ಆಯುಕ್ತರಾಗಿ ಗೌರವ್‌ಗುಪ್ತ ನೇಮಕ

**ಬೆಂಗಳೂರು:** ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ್ ಪ್ರಸಾದ್ ಕಂದಾಯ ಇಲಾಖೆಗೆ ವರ್ಗಾವಣೆ ಆಗಿದ್ದು ಪಾಲಿಕೆ ನೂತನ ಕಾಯ್ದೆಯ ಅನ್ವಯ ಬಿಬಿಎಂಪಿ ಮುಖ್ಯ ಆಯುಕ್ತರಾಗಿ ಪಾಲಿಕೆ ಆಡಳಿತಾಧಿಕಾರಿ ಆಗಿರುವ ಗೌರವ್‌ಗುಪ್ತ ಗುರುವಾರ (ಏ.1)ಕ್ಕೆ ಅಧಿಕಾರ ಸ್ವೀಕರಿಸಲಿದ್ದಾರೆ.



ಬೆಂಗಳೂರಿನಲ್ಲಿ ಕೊರೊನಾ ಸೋಂಕು ಉಲ್ಬಣಿಸಿ, ಪರಿಸ್ಥಿತಿ ಕೈಮೀರಿದ್ದ ಹಂತದಲ್ಲಿ ಪಾಲಿಕೆ ಆಯುಕ್ತರಾಗಿ ಎನ್.ಮಂಜುನಾಥ್ ಪ್ರಸಾದ್ ಅಧಿಕಾರ ಸ್ವೀಕರಿಸಿದ್ದರು. ಆಯುಕ್ತರಾಗಿ ಸುದೀರ್ಘ ಅವಧಿಗೆ ಸೇವೆ ಸಲ್ಲಿಸಿರುವ ಮಂಜುನಾಥ್ ಪ್ರಸಾದ್ ನಗರದಲ್ಲಿ ಕೊರೊನಾ ಸೋಂಕು ನಿಯಂತ್ರಣಕ್ಕೆ ತರುವಲ್ಲಿ ಯಶಸ್ವಿ ಆಗಿದ್ದರು.

ಪಾಲಿಕೆ ಮೇಯರ್ ಸೇರಿದಂತೆ ಯಾವುದೇ ಸದಸ್ಯರು ಅಧಿಕಾರದಲ್ಲಿ ಇಲ್ಲದೆ ಇದ್ದರೂ, ವಾರ್ಡ್‌ವಾರು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡುವ ಮೂಲಕ ವಾರ್ಡ್ ಮಟ್ಟದಲ್ಲಿನ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗಿತ್ತು. ಎರಡನೇ ಬಾರಿ ಪಾಲಿಕೆ ಆಯುಕ್ತರಾಗಿ 9 ತಿಂಗಳ ಸೇವೆ ಸಲ್ಲಿಸಿರುವ ಮಂಜುನಾಥ್ ಪ್ರಸಾದ್ ಇದೀಗ ಮರಳಿ ಕಂದಾಯ ಇಲಾಖೆಗೆ ಹಿಂದಿರುಗಿದ್ದಾರೆ.

ಈ ಸಂಬಂಧ ಪ್ರತಿಕ್ರಿಯಿಸಿದ ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ್ ಪ್ರಸಾದ್, ಬಿಬಿಎಂಪಿ ಆಯುಕ್ತರ ಹುದ್ದೆ ಹೆಚ್ಚು ಪರಿಶ್ರಮವನ್ನು ಬೇಕಾಗಿದೆ. ನನಗೆ ಕೊರೊನಾ ಸೋಂಕು ದೃಢಪಟ್ಟ ಮೇಲೆ ಈ ಜವಾಬ್ದಾರಿ ಮತ್ತು ಸಮಯ ಹೊಂದಾಣಿಕೆ ಮಾಡಿಕೊಳ್ಳುವುದು ಸವಾಲಾಗಿ ಪರಿಣಮಿಸಿತ್ತು. ಬಿಬಿಎಂಪಿ ಆಯುಕ್ತರಿಗೆ ಬೆಳಗ್ಗೆ 6ರಿಂದ ರಾತ್ರಿ 12ರ ವರೆಗೆ ನಿರಂತರ ಕೆಲಸ ಇರುತ್ತದೆ. ಇದರೊಂದಿಗೆ ಹೆಚ್ಚುವರಿ ಜವಾಬ್ದಾರಿಯೂ ಇದೆ. ಹೀಗಾಗಿ, ಹುದ್ದೆ ಬದಲಾವಣೆಯ ಬಗ್ಗೆ ನಾನೇ ಸರ್ಕಾರಕ್ಕೆ ಮನವಿ ಮಾಡಿದ್ದೆ ಎಂದರು.

ಪಾಲಿಕೆ ಕೇಂದ್ರ ಕಚೇರಿಯಲ್ಲಿ ಆಡಳಿತಾಧಿಕಾರಿಯಾಗಿ ರಾಕೇಶ್ ಸಿಂಗ್ ಅಧಿಕಾರ ಸ್ವೀಕರಿಸಲಿದ್ದಾರೆ.